# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಿನಾಂಕ :- 21/06/2022 ರಂದು ವಾರ್ಡಿನ ನೋಡಲ್ ಅಧಿಕಾರಿರವರ ಅಧ್ಯಕ್ಷತೆಯಲ್ಲಿ ವಾರ್ಡಿನ ಕೊಂದು ಕೋರತೆಗಳ ಬಗ್ಗೆ ನಡೆದ ಸಭೆಯ ನಡುವಳಿ

ಸಭೆಗೆ ಹಾಜರಿದ್ದ ಅಧಿಕಾರಿಗಳು ಮತ್ತು ಸಾರ್ವಜನಿಕರು :-

- ಶ್ರೀ.ರವಿವಡ್ಡರ್, ನೋಡಲ್ ಅಧಿಕಾರಿ ವಾರ್ಡ್ ಸಂಖ್ಯೆ-31.
- ಶ್ರೀ. ಬಸವರಾಜು, ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ-31.
- ಶ್ರೀ. ವಿನಯ, ಕಿರಿಯ ಆರೋಗ್ಯ ಪರೀವಿಕ್ಷಕರು ವಾರ್ಡ್ ಸಂಖ್ಯೆ-31.
- ಶ್ರೀ. ಹರೀಶ್, ಕಂದಾಯ ಅಧಿಕಾರಿಗಳು ವಾರ್ಡ್ ಸಂಖ್ಯೆ-31.
- ಶ್ರೀ. ರಾಹುಲ್, ಸಿವಿಲ್ ಇಂಜಿನೀಯರ್ ಬಿ.ಡಬ್ಲೂ.ಎಸ್.ಎಸ್.ಬಿ ವಾರ್ಡ್ ಸಂಖ್ಯೆ-31.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ನೋಡಲ್ ಅಧಿಕಾರಿರವರು ಎಲ್ಲಾ ಸದಸ್ಯರು ಹಾಗೂ ಅಧಿಕಾರಿಗಳನ್ನು ಸ್ವಾಗತಿಸಿದರು. ವಾರ್ಡ್-31 ರ ವಾರ್ಡ್ ಸಮಿತಿ ಸಭೆಯನ್ನು ತಮಿಳ್ ಸಂಘ ಸ್ಕೂಲ್‌ನಲ್ಲಿ ನಡೆಸಲಾಯಿತು. ನೋಡಲ್ ಅಧಿಕಾರಿಗಳು ವಾರ್ಡ್‌ನ ಸಾರ್ವಜನಿಕರ ಕುಂದು ಕೊರತೆಗಳನ್ನು ಸದಸ್ಯರು ಮತ್ತು ಅಧಿಕಾರಿಗಳ ಜೋತೆಯಲ್ಲಿ ಚರ್ಚಿಸಿದರು ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳವ ಬಗ್ಗೆ ಸಂಬಂದಪಟ್ಟ ಅಧಿಕಾರಿ ಹಾಗೂ ನೌಕರರುಗಳಿಗೆ ಈ ಕೆಳಕಂಡತೆ ತಿಳಿಸಲಾಗಿರುತ್ತದೆ.

❖ ಕಾಮಗಾರಿ ಇಲಾಖೆಗೆ ಸಂಬಂದಿಸಿರುವುದು

- ವಾರ್ಡ್ ವ್ಯಾಪ್ತಿಯ ರಸ್ತೆ ಬದಿಯ ಡೆಬ್ರಿಸ್‌ಗಳನ್ನು ತೆರೆವುಗೊಳಿಸಲು ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರೊಂದಿಗೆ ಕೂಡಲೇ ತೆರೆವುಗೊಳಿಸಲು ತಿಳಿಸಿದೆ.

**ಕ್ರಮ : ಕಾಮಗಾರಿ ಪರೀವಿಕ್ಷಕರು ರಸ್ತೆ ಬದಿಯ ಡೆಬ್ರಿಸ್‌ಗಳನ್ನು ಶಿಘ್ರದಲ್ಲೆ ತೇರುವುಗೊಳಿಸಲು ಕ್ರಮ ವಹಿಸುತ್ತೇನೆ ಎಂದು ಪ್ರತಿಕ್ರಿಯೆ ನೀಡಿದರು.**

❖ ಘನತ್ಯಾಜ್ಯ ಇಲಾಖೆಗೆ ಸಂಬಂದಿಸಿರುವುದು

- ಕಿರಿಯ ಆರೋಗ್ಯ ಪರೀವಿಕ್ಷಕರುಇಂದಿನ ಸಭೆಯಲ್ಲಿ ಎದ್ದುನಿಂತು ಇಂದು 54-ಪೌರಕಾರ್ಮಿಕರು, 12-ಆಟೋ, 3-ಕಾಂಪ್ಯಾಕ್ಟರ್ ಹಾಜರಾಗಿವೆ ಎಂದು ತಿಳಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿನ ಸೌಕಾರ್ ಲೇನ್‌ನಲ್ಲಿ ಕಸ ನಿರ್ವಹಣೆ ಸರಿಯಾಗಿ ಮಾಡುತ್ತಿಲ್ಲ, ಕೂಡಲೆ ಈ ಸಮಸ್ಯೆ ಪರಿಹರಿಸಲು ಕಿರಿಯ ಆರೋಗ್ಯ ಪರೀವಿಕ್ಷಕರಿಗೆ ಸೂಚಿಸಿದರು.

**ಕ್ರಮ : ಈ ಮೇಲೆ ಸೂಚಿಸಿರುವಂತಹ ಸಮಸ್ಯೆಗಳಿಗೆ ಪರಿಹರಿಸುವಂತೆ ವಾರ್ಡ್ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು**

❖ **<u>ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಗೆ ಸಂಬಂಧಿಸಿರುವುದು</u>**

- ವಾರ್ಡ್ ವ್ಯಾಪ್ತಿಯಲ್ಲಿನ ಅಕ್ರಮ ನೀರಿನ ಸಂಪರ್ಕಗಳು ಹಾಗೂ ಸಕ್ರಮಗೊಳಿಸಿದ ನೀರಿನ ಸಂಪರ್ಕಗಳ ವಿವರಗಳೊಂದಿಗೆ ಮುಂದಿನ ಸಭೆಯಲ್ಲಿ ಹಾಜರಾಗಲು ಸೂಚಿಸಿದೆ.
- ವಾರ್ಡ್ ವ್ಯಾಪ್ತಿಯಲ್ಲಿ ಒಳಚರಂಡಿ ಕಾಮಗಾರಿಗಳ ವಿವರ ಹಾಗೂ ಕಾಮಗಾರಿ ನಿರ್ವಹಿಸಲು ರಸ್ತೆ ಕತ್ತರಿಸಲು ಬಿ.ಬಿ.ಎಂ.ಪಿ ವತಿಯಿಂದ ಪಡೆದಿರುವ ಅನುಮತಿ ಪತ್ರದ ಮಾದರಿಗಳನ್ನು ಮುಂದಿನ ಸಭೆಯಲ್ಲಿ ನೀಡಲು ಸೂಚಿಸಿದೆ.

**ಕ್ರಮ : ಕಿರಿಯ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ಮೇಲೆ ಸೂಚಿಸಿದ ವರದಿಗಳನ್ನು ಮುಂದಿನ ಸಭೆಯಲ್ಲಿ ಹಾಜರುಪಡಿಸುತ್ತೇನೆ ಎಂದು ಪ್ರತಿಕ್ರಿಯೆ ನೀಡಿದರು.**

ಈ ಎಲ್ಲಾ ವಿಷಯಗಳ ಬಗ್ಗೆ ತುರ್ತಾಗಿ ಕ್ರಮ ಕೈಗೊಳ್ಳಲು ಸಂಬಂದಪಟ್ಟವರಿಗೆ ಸೂಚಿಸುತ್ತಾ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದೆ.

21/6/22

**ನೋಡಲ್ ಅಧಿಕಾರಿ/ ಸದಸ್ಯ ಕಾರ್ಯದರ್ಶಿ**
**ವಾರ್ಡ್-31**

**ಪ್ರತಿಗಳನ್ನು:**

- ಮಾನ್ಯ ಆಡಳಿತಾಧಿಕಾರಿ, ಬಿ.ಬಿ.ಎಂ.ಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಮಾನ್ಯ ವಲಯ ಆಯುಕ್ತರು ರವರ ಮಾಹಿತಿಗಾಗಿ ಸಲ್ಲಿಸಿದೆ.
- ಮಾನ್ಯ ಜಂಟಿ ಆಯುಕ್ತರು (ಪೂರ್ವ) ರವರ ಮಾಹಿತಿಗಾಗಿ ಸಲ್ಲಿಸಿದೆ
- ಮುಖ್ಯ ಅಭೀಯಂತರರು (ಪೂರ್ವ) ರವರ ಮಾಹಿತಿಗಾಗಿ ಸಲ್ಲಿಸಿದೆ.
- ಕಾರ್ಯಪಾಲಕ ಅಭಿಯಂತರರು, ಪು ಕೇಶಿನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ಕಾರ್ಯಪಾಲಕ ಅಭಿಯಂ ರರು, ಕೆ.ಜಿ.ಹಳ್ಳಿ ಉಪ-ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ಕಾರ್ಯಪಾಲಕ ಅಭಿಯಂ ರರು (ಘನ ತ್ಯಾಜ್ಯ) ಪುಲಕೇಶಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ಕಾರ್ಯಪಾಲಕ ಅಭಿಯಂ ರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ನೇತಾಜಿ ರಸ್ತೆ, ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ಕಾರ್ಯಪಾಲಕ ಅಭಿಯಂ ರರು (ಸ್ಟ್ರೀಟ್ ಲೈಟ್) ರವರ ಮಾಹಿತಿಗಾಗಿ ಸಲ್ಲಿಸಿದೆ.
- ಕಛೇರಿ ಪ್ರತಿ.